## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Kanigiri Renewable Private Limited ಕಂಪನಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 10.50 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ::

1. ಸರ್ಕಾರದ ಆದೇಶ ಸಂಖ್ಯೆ: ಇಎನ್ 291 ಎನ್‌ಸಿಇ 2016 ದಿನಾಂಕ: 13.02.2017.
2. ಸರ್ಕಾರದ ಆದೇಶ ಸಂಖ್ಯೆ: ಇಎನ್ 525 ಎನ್‌ಸಿಇ 2018 ದಿನಾಂಕ: 27.09.2018.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 1752 (K).

* * *

46714
15/11/18

ಪ್ರಸ್ತಾವನೆ :- MD KREDL

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸರ್ಕಾರದ ಆದೇಶದಲ್ಲಿ M/s Kshethra Energy Private Limited ಕಂಪನಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಕಾನನಕಟ್ಟೆ, ಮಾದಮುಟ್ಟೇನಹಳ್ಳಿ, ಹುಚ್ಚವ್ವನಹಳ್ಳಿ ಮತ್ತು ಗೊಲ್ಲರಹಟ್ಟಿ ಗ್ರಾಮಗಳಲ್ಲಿ ಹಂಚಿಯಾಗಿರುವ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರ ಸರ್ಕಾರದ ಆದೇಶದಲ್ಲಿ M/s Kshethra Energy Private Limited ಕಂಪನಿಗೆ ದಾವಣಗೆರೆ ಜಿಲ್ಲೆಯ, ಜಗಳೂರು ತಾಲ್ಲೂಕಿನ ಕಾನನಕಟ್ಟೆ, ಮಾದಮುಟ್ಟೇನಹಳ್ಳಿ, ಹುಚ್ಚವ್ವನಹಳ್ಳಿ ಮತ್ತು ಗೊಲ್ಲರಹಟ್ಟಿ ಗ್ರಾಮಗಳಲ್ಲಿ ಹಂಚಿಯಾಗಿರುವ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ವಂತ ಬಳಕೆ (Captive Consumption) / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಉದ್ದೇಶಕ್ಕಾಗಿ M/s Kanigiri Renewable Private Limited ಕಂಪನಿಗೆ ವರ್ಗಾಯಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಏಕ ಕಡತ ಪದ್ಧತಿಯಡಿ M/s Kanigiri Renewable Private Limited ಕಂಪನಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ ಸಾಮರ್ಥ್ಯವನ್ನು ಸ್ವಂತ ಬಳಕೆಗೆ /ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಸಲುವಾಗಿ 10.50 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಕೋರಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, M/s Kanigiri Renewable

Copy Attested under RTI

Asst. Public Information Officer

Wind Section...2)
Inward No ...
Date: ...
Sig...

Private Limited ಕಂಪನಿಯು CIN No. U31906TN2017PTC119387 ರನ್ವಯ Registrar of Companies, Ministry of Corporate Affairs, Government of India, Tamilnadu Chennai ಇಲ್ಲಿ ದಿನಾಂಕ: 06.11.2017 ರಂದು ನೋಂದಣಿಗೊಂಡಿದ್ದು, ನೊಂದಾಯಿತ ಕಚೇರಿ ತಮಿಳುನಾಡಿನ ಚೆನ್ನೈನಲ್ಲಿ ಸ್ಥಾಪಿತಗೊಂಡಿರುತ್ತದೆ. ಸದರಿ ಕಂಪನಿಯು M/s Siemens Gamesa Renewable Power Private Limited ಕಂಪನಿಯ ಅಂಗ ಸಂಸ್ಥೆಯಾಗಿದ್ದು, ದಿನಾಂಕ: 31.03.2018 ರ ಅಂತ್ಯಕ್ಕೆ ಸದರಿ ಕಂಪನಿಯ ನೆಟ್‌ವರ್ತ್ ರೂ.2667.27 ಕೋಟಿಗಳಾಗಿರುವುದಾಗಿ ಚಾರ್ಟೆಡ್ ಅಕೌಂಟೆಂಡ್ ರವರು ದೃಢೀಕರಣ ಹಾಗೂ ಬ್ಯಾಲೆನ್ಸ್ ಶೀಟ್‌ಗಳನ್ನು ಸಲ್ಲಿಸಿರುತ್ತಾರೆಂದು ತಿಳಿಸುತ್ತಾ, M/s Kanigiri Renewable Private Limited ಕಂಪನಿಗೆ ಹಂಚಿಕೆಯಾದ 10 ಮೆ.ವ್ಯಾ ಸಾಮರ್ಥ್ಯವನ್ನು Captive / 3rd Party ಗೆ ಮಾರಾಟ ಮಾಡುವ ಸಲುವಾಗಿ 10.50 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಲು ಕೋರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

Geographical area description for 10.50 MW capacity Wind power project of M/s Kanigiri Renewable Private Limited

| Sl. No | Geographical area description of the project | Near by villages of the proposed area and district | Sanctioned capacity in MW | Enhancement proposed in MW | Total capacity in MW |
|---|---|---|---|---|---|
| 1 | The proposed area consists of private land and road crossing in the area towards chitradurga and Hosahalli. The area surrounded by the points A, B, C, D, E, F and held in the following Geographical co-ordinates as:<br>Point A: Lat: 14°30'32.56''N Long: 76°25'46.59''E<br>Point B: Lat: 14°32'17.39''N Long: 76°25'51.91''E<br>Point C: Lat: 14°32'46.04''N Long: 76°25'7.35''E<br>Point D: Lat: 14°35'0''N Long: 76°25'38.78''E<br>Point E: Lat: 14°35'0''N Long: 76°27'33.57''E<br>Point F: Lat: 14°30'32.56''N Long: 76°25'51.02''E<br>Ridge Peaks: 649m AMSL.<br>Toposheet No. 57 B / 6 | Kananakatte, Madamuttenahalli, Huchchavanahalli and Gollarahatti Villages of Jagalur Taluk, Davanagere District. | 10 MW | 0.50 MW | 10.50 MW (05 Nos x 2100 kw) |
| | Total | | | | 10.50 MW |

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಇಎನ್ 567 ಎನ್‌ಸಿಇ 2018 ಬೆಂಗಳೂರು, ದಿನಾಂಕ: 03.11.2018.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s Kanigiri Renewable Private Limited ಕಂಪನಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು Captive / 3rd Party ಗೆ ಮಾರಾಟ ಮಾಡುವ ಸಲುವಾಗಿ ಶೆಡ್ಯೂಲ್‌ನಲ್ಲಿರುವಂತೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಟ್ಟು 10.50 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಿ ಆದೇಶಿಸಲಾಗಿದೆ.

....3)

Asst. Public Information Officer
KREDL

## Geographical area description for 10.50 MW capacity Wind power project of M/s Kanigiri Renewable Private Limited

| Sl. No | Geographical area description of the project | Near by villages of the proposed area and district | Sanctioned capacity in MW | Enhancement proposed in MW | Total capacity in MW |
|---|---|---|---|---|---|
| 1 | The proposed area consists of private land and road crossing in the area towards chitradurga and Hosahalli.The area surrounded by the points A, B, C, D, E, F and held in the following Geographical co-ordinates as:<br>Point A: Lat: 14°30'32.56''N Long: 76°25'46.59''E<br>Point B: Lat: 14°32'17.39''N Long: 76°25'51.91''E<br>Point C: Lat: 14°32'46.04''N Long: 76°25'7.35''E<br>Point D: Lat: 14°35'0''N Long: 76°25'38.78''E<br>Point E: Lat: 14°35'0''N Long: 76°27'33.57''E<br>Point F: Lat: 14°30'32.56''N Long: 76°25'51.02''E<br>Ridge Peaks: 649m AMSL.<br>Toposheet No. 57 B / 6 | Kananakatte, Madamuttenahalli, Huchchavanahalli and Gollarahatti Villages of Jagalur Taluk, Davanagere District. | 10 MW | 0.50 MW | 10.50 MW (05 Nos x 2100 kw) |
| | **Total** | | | | **10.50 MW** |

ಷರತ್ತು ಮತ್ತು ನಿಬಂಧನೆಗಳು

1. M/s Kanigiri Renewable Private Limited ಕಂಪನಿಯು ನಿಯಮಾನುಸಾರ ವರ್ಗಾವಣೆ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್ ಸಂಸ್ಥೆಗೆ ಪಾವತಿಸತಕ್ಕದ್ದು.
2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
3. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
4. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
7. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.
8. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

Copy Attested under RTI

...4)

Asst. Public Information Officer
KREDL

9. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

10. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.

11. ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

12. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

13. ಉಳಿದಂತೆ, ಸರ್ಕಾರದ ಆದೇಶ ಸಂಖ್ಯೆ: ಇಎನ್ 291 ಎನ್‌ಸಿಇ 2016 ದಿನಾಂಕ: 13.02.2017 ಮತ್ತು ಸರ್ಕಾರದ ಆದೇಶ ಸಂಖ್ಯೆ: ಇಎನ್ 525 ಎನ್‌ಸಿಇ 2018 ದಿನಾಂಕ: 27.09.2018 ರಲ್ಲಿನ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಈ ಆದೇಶವನ್ನು ರದ್ದುಪಡಿಸುವ / ಮಾರ್ಪಡಿಸುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Manj 3/11/18

(ಟಿ.ಮಂಜಪ್ಪ)

ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಇಂಧನ ಇಲಾಖೆ.

03/11/2018

ಇವರಿಗೆ :

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4 ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ.
5 ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ.
6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆ ರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
7 ಉಪ ಅರಣ್ಯ ಸಂರಕ್ಷಣಾಧಿಕಾರಿ, ಪ್ರಾದೇಶಿಕ ವಿಭಾಗ, ದಾವಣಗೆರೆ ಜಿಲ್ಲೆ.
8 ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10 M/s Kanigiri Renewable Private Limited, The Futura, Block B, 8th Floor, No.334, Rajiv Gandhi Salai, Sholinganallur, Chennai – 600 119, Tamilnadu.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Copy Attested under RTI

Asst. Public Information Officer
KREDL